ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 21/12/19

# ಸಾಹಿತಿ ಎಲ್‌ಎಸ್ ಶೇಷಗಿರಿರಾವ್ ಇನ್ನಿಲ್ಲ

ಬೆಂಗಳೂರು: ಹಿರಿಯ ಸಾಹಿತಿ ಎಲ್.ಎಸ್. ಶೇಷಗಿರಿರಾವ್ ಅವರು ಶುಕ್ರವಾರ ಬೆಂಗಳೂರಿನಲ್ಲಿ ನಿಧನರಾಗಿದ್ದಾರೆ. ಮೃತರಿಗೆ 95 ವರ್ಷ ವಯಸ್ಸಾಗಿತ್ತು. ಕಳೆದ ಒಂದು ತಿಂಗಳಿನಿಂದ ಅನಾರೋಗ್ಯ ಪೀಡಿತರಾಗಿ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರು ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟರು.



ಕನ್ನಡ, ಇಂಗ್ಲಿಷ್ ಭಾಷೆಗಳಲ್ಲಿ ಸಮಾನ ಪ್ರಭುತ್ವ ಹೊಂದಿದ್ದ ಸಾಹಿತಿ ಎಲ್.ಎಸ್. ಶೇಷಗಿರಿ ರಾವ್ ಎಲ್‌ಎಸ್‌ಎಸ್ ಎಂದೇ ಖ್ಯಾತರಾಗಿದ್ದರು. ಕಾಲೇಜು ಶಿಕ್ಷಣ ಇಲಾಖೆಗೆ ಸೇರಿ ಕೋಲಾರ, ಮಡಿಕೇರಿ, ಬೆಂಗಳೂರುಗಳಲ್ಲಿ ಕಾಲೇಜು ಅಧ್ಯಾಪಕರಾಗಿ, ಬೆಂಗಳೂರು ವಿವಿಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದರು. ಕನ್ನಡ ಪುಸ್ತಕ ಪ್ರಾಧಿಕಾರದ ಪ್ರಥಮ ಅಧ್ಯಕ್ಷರಾಗಿ ಕೆಲಸ ಮಾಡಿದ ಅವರು 1947–50ರಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾಗಿ, ಬಿ.ಎಂ.ಶ್ರೀ ಸ್ಮಾರಕ ಪ್ರತಿಷ್ಠಾನದ ಅಧ್ಯಕ್ಷರಾಗಿ, ಕೇಂದ್ರ ಸಾಹಿತ್ಯ ಅಕಾಡೆಮಿ ನ್ಯಾಷನಲ್ ಬುಕ್ ಟ್ರಸ್ಟ್ ಸೇರಿದಂತೆ ಹಲವು ಸಮಿತಿಗಳಲ್ಲಿ ಕಾರ್ಯನಿರ್ವಹಿಸಿದ್ದಾರೆ.

ನುಡಿನಮನ ಪುಟ-6